RNU AIR DHARWAD

# JULY 16,2024
# ALL INDIA RADIO- DHARWAD
# PRADESH SAMACHARA (KANNADA) 7:05 AM

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

**ಓದಿದವರು: ವಿವೇಕಾದಿತ್ಯ ಕನಿಯಾಲ**

<><><>

**ಮುಖ್ಯಾಂಶಗಳು:**

- **ರಾಜ್ಯ ವಿಧಾನಮಂಡಲ ಅಧಿವೇಶನ ಆರಂಭ; ಅಗಲಿದ 14 ಜನ ಗಣ್ಯರಿಗೆ ಸಂತಾಪ ಸೂಚನೆ; ಉಭಯ ಸದನಗಳಲ್ಲಿ, ಸಾಧಕರ ಸ್ಮರಣೆ.**
- **ಡೆಂಘಿ ಚಿಕಿತ್ಸೆಗೆ, ಏಕ ರೂಪದ ದರ ನಿಗದಿ; ಹೆಚ್ಚಿನ ದರ ಪಡೆದಲ್ಲಿ, ನಿರ್ದಾಕ್ಷಿಣ್ಯ ಕ್ರಮ – ಸಚಿವ ದಿನೇಶ್ ಗುಂಡೂರಾವ್, ಎಚ್ಚರಿಕೆ.**
- **ಆಗಸ್ಟ್ ಒಂದರಿಂದ ಏಳನೇ ವೇತನ ಆಯೋಗದ ಶಿಫಾರಸು, ಜಾರಿಗೆ – ಸಚಿವ ಸಂಪುಟ, ಅನುಮೋದನೆ.**
- **ರಾಜ್ಯದ ಕರಾವಳಿ ಹಾಗೂ ಮಲೆನಾಡಿನಲ್ಲಿ, ಮಳೆ ಮುಂದುವರಿಕೆ; ಹಲವು ಜಿಲ್ಲೆಗಳಲ್ಲಿ ಇಂದು ಶಾಲೆ–ಕಾಲೇಜುಗಳಿಗೆ ರಜೆ ಘೋಷಣೆ.**

<><><>

**ಈಗ ವಾರ್ತೆಗಳ ವಿವರ**

<><><>

**ರಾಜ್ಯ ವಿಧಾನಮಂಡಲ ಅಧಿವೇಶನ ಸೋಮವಾರ ಆರಂಭಗೊಂಡಿತು. ವಿಧಾನಸಭೆಯ ಮುಂಗಾರು ಅಧಿವೇಶನದಲ್ಲಿ, ಇತ್ತೀಚೆಗೆ ನಿಧನರಾದ 14 ಜನ ಗಣ್ಯರಿಗೆ ಸಂತಾಪ ಸೂಚಿಸಲಾಯಿತು. ಕಲಾಪ ಆರಂಭವಾಗುತ್ತಿದ್ದಂತೆ ವಿಧಾನಸಭಾಧ್ಯಕ್ಷ ಯು.ಟಿ.ಖಾದರ್ ಅವರು, ಅಗಲಿದ ಗಣ್ಯರಿಗೆ ಸಂತಾಪ ಸೂಚಿಸುವ ಪ್ರಸ್ತಾವ ಮಂಡಿಸಿದರು.**

**ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಾತನಾಡಿ, ಅಗಲಿದ ಗಣ್ಯರು ನಾಡಿಗೆ ನೀಡಿದ ಸೇವೆಯನ್ನು ಸ್ಮರಿಸಿದರು. ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಪ್ರತಿಪಕ್ಷ ನಾಯಕ ಆರ್.ಅಶೋಕ, ಕಲಾಪದಲ್ಲಿ ಪಾಲ್ಗೊಂಡರು.**

ಛತ್ತೀಸ್‌ಗಢ ಮಾಜಿ ಮುಖ್ಯಮಂತ್ರಿ ಭೂಪೇಶ್ ಬಘೇಲ್ ಹಾಗೂ ಮಾಜಿ ಕೇಂದ್ರ ಸಚಿವ ಪ್ರದೀಪ್ ಕುಮಾರ್ ಜೈನ್ ವಿಧಾನಸಭೆಯ ಪ್ರೇಕ್ಷಕರ ಗ್ಯಾಲರಿಯಲ್ಲಿ ಕುಳಿತು ಕಲಾಪವನ್ನು ವೀಕ್ಷಿಸಿದರು. ಅವರನ್ನು ಸದನದ ಪರವಾಗಿ ಸಭಾಧ್ಯಕ್ಷ ಯು.ಟಿ.ಖಾದರ್ ಸ್ವಾಗತಿಸಿದರು.

<><><>

ವಿಧಾನಸಭೆಯಲ್ಲಿ ಕೃತಕ ಬುದ್ಧಿಮತ್ತೆಯ ಕ್ಯಾಮೆರಾಗಳನ್ನು ಅಳವಡಿಸಲಾಗಿದ್ದು, ಸದಸ್ಯರು ಒಳ ಬರುವ, ಹೊರ ಹೋಗುವ ಮತ್ತು ಸದನದಲ್ಲಿ ಉಪಸ್ಥಿತರಿರುವ ಸಮಯವನ್ನು, ಈ ಕ್ಯಾಮೆರಾಗಳು ದಾಖಲಿಸಲಿವೆ ಎಂದು ಸಭಾಧ್ಯಕ್ಷ ಯು.ಟಿ.ಖಾದರ್, ಸದನಕ್ಕೆ ತಿಳಿಸಿದರು.

<><><>

ಇದಕ್ಕೂ ಮೊದಲು, ವಿಧಾನಸಭೆ ಸಭಾಂಗಣದ ಪ್ರವೇಶ ದ್ವಾರಕ್ಕೆ, ಬೀಟೆ ಮರದಲ್ಲಿ ಹೊಸದಾಗಿ ಕಲಾತ್ಮಕ ಕುಸುರಿ ಕೆತ್ತನೆಯಿಂದ ವಿನ್ಯಾಸಗೊಳಿಸಿ, ಅಳವಡಿಸಿರುವ ದ್ವಾರವನ್ನು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಉದ್ಘಾಟಿಸಿದರು.

<><><>

ವಿಧಾನ ಪರಿ 'ತ್‌ನ ಮುಂಗಾರು ಅಧಿವೇಶನ, ಸೋಮವಾರ ಆರಂಭವಾಯಿತು. ಕಲಾಪ ಆರಂಭವಾಗುತ್ತಿದ್ದಂತೆ, ಸಭಾಪತಿ ಬಸವರಾಜ ಹೊರಟ್ಟಿ ಅವರು ಸಭಾ ನಾಯಕರಾಗಿ, ಕಾಂಗ್ರೆಸ್‌ನ ಎನ್.ಎಸ್. ಬೋಸರಾಜು ಅವರನ್ನು ನೇಮಕ ಮಾಡಲಾಗಿದೆ ಎಂದು ಪ್ರಕಟಿಸಿದರು.

ನಂತರ ಸಭಾಪತಿಗಳು ಅಗಲಿದ ಗಣ್ಯರಿಗೆ ಗೌರವ ಸೂಚಿಸುವ ಸಂತಾಪ ನಿರ್ಣಯವನ್ನು ಮಂಡಿಸಿದರು. ಅಗಲಿದ ಗಣ್ಯರ ಸೇವೆಯನ್ನು ಸ್ಮರಿಸಿದರು.

ಪಾಡ್ದಾನ ಕಲಾವಿದೆ ಗಿಡಿಗೆರೆ ರಾಮಕ್ಕ, ಯಕ್ಷಗಾನ ಕಲಾವಿದ ಸುಬ್ರಹ್ಮಣ್ಯ ಧಾರೇಶ್ವರ, ಪೇತ್ರಿ ಮಾಧವ ನಾಯಕ್, ಸರೋದ್ ವಾದಕ ಪಂಡಿತ ರಾಜೀವ್ ತಾರಾನಾಥ, ಹಿರಿಯ ರಂಗಕರ್ಮಿ ಡಾಕ್ಟರ್ ನಟೇಶ್ ರತ್ನ, ಸೇರಿದಂತೆ ಹದಿನಾಲ್ಕು ಜನರಿಗೆ ಸದನ ಸಂತಾಪ ಸೂಚಿಸಿತು.

<><><>

ವಿಧಾನ ಮಂಡಲದ ಉಭಯ ಸದನಗಳಲ್ಲಿ ಸಭಾಧ್ಯಕ್ಷರು, ಸದಸ್ಯರಿಗೆ ಸಂವಿಧಾನದ ಪೀಠಿಕೆಯನ್ನು ಬೋಧಿಸಿದರು.

<><><>

ಜೆ.ಡಿ.ಎಸ್ ಶಾಸಕ ಸಿ.ಬಿ. ಸುರೇಶ್ ಬಾಬು, ಪಕ್ಷದ ಶಾಸಕಾಂಗ ಪಕ್ಷದ ನಾಯಕರಾಗಿ ಆಯ್ಕೆಯಾಗಿದ್ದಾರೆ ಎಂದು, ವಿಧಾನಸಭಾಧ್ಯಕ್ಷ ಯು.ಟಿ. ಖಾದರ್ ಸದನದಲ್ಲಿ ಘೋಷಿಸಿದರು.

<><><>

ರಾಜ್ಯದಲ್ಲಿ ಡೆಂಘಿ ಪ್ರಕರಣಗಳ ಚಿಕಿತ್ಸೆಗೆ, ಖಾಸಗಿ ಆಸ್ಪತ್ರೆಯವರು ಹೆಚ್ಚಿನ ದರ ಪಡೆದರೆ, ಅಂಥವರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಲಾಗುವುದು ಎಂದು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಖಾತೆ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ.

ಶಾಸಕ ಧನಂಜಯ ಸರ್ಜಿ ಪರವಾಗಿ, ಸದಸ್ಯ ಡಿ.ಎಸ್. ಅರುಣ್ ಕೇಳಿದ ಪ್ರಶ್ನೆಗೆ, ವಿಧಾನಸಭೆಯಲ್ಲಿ ಉತ್ತರಿಸಿದ ಸಚಿವರು, ಖಾಸಗಿ ಆಸ್ಪತ್ರೆಗಳಿಗೆ ಈಗಾಗಲೇ ದರ ನಿಗದಿ ಪಡಿಸಿ, ಸರ್ಕಾರ ಸುತ್ತೋಲೆ ಹೊರಡಿಸಿದೆ. ಅದನ್ನು ಮೀರುವಂತಿಲ್ಲ ಎಂದರು.

ಡೆಂಘಿ ಪ್ರಕರಣ ನಿಯಂತ್ರಿಸಲು, ಮುಖ್ಯಮಂತ್ರಿಯವರ ಸೂಚನೆಯಂತೆ, ವಿಶೇಷ ಕಾರ್ಯಪಡೆ ರೂಪಿಸಲಾಗಿದೆ ಎಂದು ಅವರು ಹೇಳಿದರು.

<><><>

ವಿಧಾನ ಪರಿಷತ್ತಿನಲ್ಲಿ, ಬಿಜೆಪಿ ಶಾಸಕ ಸಿ.ಟಿ. ರವಿ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವ ದಿನೇಶ್ ಗುಂಡೂರಾವ್, ರಾಜ್ಯದಲ್ಲಿ ಹೆಚ್ಚುತ್ತಿರುವ ಭ್ರೂಣ ಹತ್ಯೆಯನ್ನು ಗಂಭೀರವಾಗಿ ಪರಿಗಣಿಸಲಾಗಿದೆ. ತಪ್ಪಿತಸ್ಥರ ಮೇಲೆ ಕಠಿಣ ಕಾನೂನು ಕ್ರಮ ಜರುಗಿಸಲು, ಕ್ರಮ ಕೈಗೊಳ್ಳಲಾಗುತ್ತಿದೆ ಎಂದರು.

<><><>

ಈ ಮಧ್ಯೆ, ಹಾವೇರಿ ಜಿಲ್ಲೆಯ ಕೆಲ ಗ್ರಾಮಗಳಲ್ಲಿ, ಡೆಂಘಿ ಪ್ರಕರಣಗಳು ಏರು ಗತಿಯಲ್ಲಿದ್ದು, ಜನರಿಗೆ ಸಕಾಲಿಕ ಚಿಕಿತ್ಸೆ ಖಾತ್ರಿ ಪಡಿಸಲು, ತಾತ್ಕಾಲಿಕ ಕ್ಲಿನಿಕ್‌ಗಳನ್ನು ತೆರೆಯಲು ತೀರ್ಮಾನಿಸಲಾಗಿದೆ ಎಂದು, ಜಿಲ್ಲಾಧಿಕಾರಿ ವಿಜಯ ಮಹಾಂತೇಶ ದಾನಮ್ಮನವರ ತಿಳಿಸಿದ್ದಾರೆ.

<><><>

ರಾಜ್ಯದಲ್ಲಿ 1 ಲಕ್ಷದ 73 ಸಾವಿರ, ಬಿ.ಪಿ.ಎಲ್. ಪಡಿತರ ಕಾರ್ಡ್‌ಗಳನ್ನು ಕೋರಿ ಸಲ್ಲಿಸಲಾದ ಅರ್ಜಿಗಳ ವಿಲೇವಾರಿ ಬಾಕಿ ಇದೆ; ಆದಷ್ಟು ಬೇಗ, ಅರ್ಹ ಅರ್ಜಿದಾರರಿಗೆ ಬಿ.ಪಿ.ಎಲ್. ಕಾರ್ಡ್ ಮಂಜೂರು ಮಾಡಲು, ಕ್ರಮ ಕೈಗೊಳ್ಳಲಾಗುವುದು ಎಂದು, ಆಹಾರ ಮತ್ತು ನಾಗರಿಕ ಸರಬರಾಜು ಖಾತೆ ಸಚಿವ ಕೆ.ಎಚ್. ಮುನಿಯಪ್ಪ ತಿಳಿಸಿದ್ದಾರೆ.

ವಿಧಾನ ಪರಿ ’ತ್‌ನಲ್ಲಿ, ಬಿಜೆಪಿಯ ಪ್ರತಾಪ ಸಿಂಹ ನಾಯಕ್ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಕಳೆದ ಸರ್ಕಾರದ ಕಾಲಾವಧಿಯಲ್ಲಿ, 2 ಲಕ್ಷದ 95 ಸಾವಿರ ಬಿ.ಪಿ.ಎಲ್. ಕಾರ್ಡ್ ಅರ್ಜಿಗಳ ವಿಲೇವಾರಿ ಬಾಕಿ ಇತ್ತು. ಕಾಂಗ್ರೆಸ್ ಸರ್ಕಾರ ಅಸ್ತಿತ್ವಕ್ಕೆ ಬಂದ ನಂತರ, ಕೂಲಂಕಷವಾಗಿ ಪರಿಶೀಲಿಸಿ, ಹೊಸ ಪಡಿತರ ಚೀಟಿ ವಿತರಣೆ ಮಾಡಲಾಗಿದೆ ಎಂದು, ಸ್ಪಷ್ಟ ಪಡಿಸಿದರು.

<><><>

ಕೇಂದ್ರ ಪುರಸ್ಕೃತ ಹಲವು ಯೋಜನೆಗಳ ಫಲಾನುಭವಿಗಳಿಗೆ ಅನುಕೂಲ ಕಲ್ಪಿಸಲು, ಧಾರವಾಡದ ಕರ್ನಾಟಕ ವಿಕಾಸ ಗ್ರಾಮೀಣ ಬ್ಯಾಂಕ್, ಬರುವ ಸೆಪ್ಟೆಂಬರ್ 5ರ ವರೆಗೆ, ವಿಶೇಷ ಅಭಿಯಾನ ಆಯೋಜಿಸಿದೆ.

ಬ್ಯಾಂಕಿನ ಮುಖ್ಯ ಪ್ರಬಂಧಕ ಉಲ್ಲಾಸ ಗುನಗಾ ಮಾಹಿತಿ ನೀಡಿ, ಈ ಅವಧಿಯಲ್ಲಿ ಪ್ರಧಾನಮಂತ್ರಿ ಜೀವನ ಬಿಮಾ ಯೋಜನೆ ಹಾಗೂ ಪ್ರಧಾನಮಂತ್ರಿ ಸುರಕ್ಷಾ ಬಿಮಾ ಯೋಜನೆಗಳ ಫಲಾನುಭವಿಗಳಿಗಾಗಿ, 2 ಲಕ್ಷ ಹೊಸ ಉಳಿತಾಯ ಖಾತೆಗಳನ್ನು ತೆರೆಯಲು ಉದ್ದೇಶಿಸಿದೆ ಎಂದರು.

<><><>

ಪ್ರಧಾನಮಂತ್ರಿ ಸ್ವ ನಿಧಿ ಯೋಜನೆ ಕುರಿತು, ಜನ ಜಾಗ್ರತಿ ಮೂಡಿಸುವಂತೆ, ಚಿತ್ರದುರ್ಗ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

<><><>

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..

<><><>

ಬೆಳಗಾವಿಯ ವಿಶ್ವೇಶ್ವರಾಯ ತಾಂತ್ರಿಕ ವಿಶ್ವವಿದ್ಯಾಲಯದ, 24ನೇ ಘಟಿಕೋತ್ಸವ ನಾಡಿದ್ದು ದಿನಾಂಕ 18 ರಂದು, ಜ್ಞಾನ ಸಂಗಮ ಆವರಣದ, ಎ.ಪಿ.ಜೆ. ಅಬ್ದುಲ್ ಕಲಾಂ ಸಭಾಂಗಣದಲ್ಲಿ, ಅಂದು ಬೆಳಗ್ಗೆ 11.30ಕ್ಕೆ ಜರುಗಲಿದೆ ಎಂದು ವಿಶ್ವವಿದ್ಯಾಲಯದ ಉಪ ಕುಲಪತಿ ಡಾಕ್ಟರ್ ಎಸ್.ವಿದ್ಯಾಶಂಕರ ತಿಳಿಸಿದ್ದಾರೆ.

ಬೆಳಗಾವಿಯಲ್ಲಿ ಸುದ್ದಿಗೋಷ್ಠಿ ನಡೆಸಿದ ಅವರು, ಚಿಕ್ಕಬಳ್ಳಾಪುರದ ಶ್ರೀ ಮಧುಸೂಧನ್ ಸಾಯಿ ವೈದ್ಯಕೀಯ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆಯ ಸಂಸ್ಥಾಪಕ ಮಧುಸೂಧನ್ ಸಾಯಿ, ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆಯ ಅಧ್ಯಕ್ಷ ಡಾಕ್ಟರ್ ಎಸ್.ಸೋಮನಾಥ್, ಬೆಂಗಳೂರು ಇಂಟರ್ ನ್ಯಾಷನಲ್ ಏರ್ ಪೋರ್ಟ್ ಲಿಮಿಟೆಡ್ ವ್ಯವಸ್ಥಾಪಕ ನಿರ್ದೇಶಕ ಹರಿ ಮರಾರ್ ಅವರುಗಳಿಗೆ, ಡಾಕ್ಟರ್ ಆಫ್ ಸೈನ್ಸ ಗೌರವ ಪದವಿಯನ್ನು ಪ್ರದಾನ ಮಾಡಲಾಗುವುದು ಎಂದು ತಿಳಿಸಿದರು.

ಭಾರತೀಯ ವಿಜ್ಞಾನ ಮಂದಿರ – ಐ.ಐ.ಎಸ್.ಸಿ. ನಿರ್ದೇಶಕ, ಪ್ರೊಫೆಸರ್ ಗೋವಿಂದನ್ ರಂಗರಾಜನ್, ಘಟಿಕೋತ್ಸವದ ಭಾಷಣ ಮಾಡುವರು.

ಕುಲಾಧಿಪತಿ ಹಾಗೂ ರಾಜ್ಯಪಾಲ ಥಾವರಚಂದ್ ಗೆಹ್ಲೋಟ್ ಅವರು, ಘಟಿಕೋತ್ಸವಕ್ಕೆ ಚಾಲನೆ ನೀಡುವರು.

<><><>

ಕಾಸರಗೋಡಿನ ಹಿರಿಯ ಸಾಹಿತಿ, ನಾ. ಮೊಗಸಾಲೆ ಅವರಿಗೆ, ಧಾರವಾಡದ ಕರ್ನಾಟಕ ವಿದ್ಯಾವರ್ಧಕ ಸಂಘ, ತನ್ನ 135ನೇ ಸಂಸ್ಥಾಪನಾ ದಿನಾಚರಣೆ ಸಂದರ್ಭದಲ್ಲಿ, 2024ನೇ ಸಾಲಿನ, 'ಸಿರಿಗನ್ನಡಂ ಗೆಲ್ಗೆ' ರಾ.ಹ. ದೇಶಪಾಂಡೆ ಪ್ರಶಸ್ತಿಯನ್ನು ನೀಡಿ, ಗೌರವಿಸಲಿದೆ.

ಪ್ರಶಸ್ತಿಯು 50 ಸಾವಿರ ರೂಪಾಯಿ ನಗದು ಹಾಗೂ ಸ್ಮರಣಿಕೆಯನ್ನು ಒಳಗೊಂಡಿದೆ.

<><><>

ರಾಜ್ಯದ ಗಡಿ ಜಿಲ್ಲೆ, ಬೆಳಗಾವಿಯಲ್ಲಿ ಕನ್ನಡ ಉಳಿಸಿ, ಬೆಳೆಸುವಲ್ಲಿ ಕನ್ನಡಮ್ಮ ದಿನ ಪತ್ರಿಕೆಯ ಸೇವೆಯನ್ನು ಗುರುತಿಸಿ, ಧಾರವಾಡದ ಕರ್ನಾಟಕ ವಿದ್ಯಾವರ್ಧಕ ಸಂಘ, 'ಕನ್ನಡ ಪ್ರಪಂಚ ಡಾಕ್ಟರ್ ಪಾಟೀಲ ಪುಟ್ಟಪ್ಪ' ಪ್ರಶಸ್ತಿಯನ್ನು ನೀಡಿ, ಗೌರವಿಸುತ್ತಿದೆ.

ಈ ಪ್ರಶಸ್ತಿಯು 50 ಸಾವಿರ ರೂಪಾಯಿ ನಗದು ಹಾಗೂ ಸ್ಮರಣಿಕೆಯನ್ನು ಒಳಗೊಂಡಿದೆ ಎಂದು, ಸಂಘದ ಪ್ರಧಾನ ಕಾರ್ಯದರ್ಶಿ ಶಂಕರ ಹಲಗತ್ತಿ ತಿಳಿಸಿದ್ದಾರೆ.

<><><>

ಹವಾಮಾನ ಇಲಾಖೆ ಮುನ್ಸೂಚನೆಯಂತೆ, ಮುಂದಿನ 24 ಗಂಟೆಗಳಲ್ಲಿ ಉತ್ತರಕನ್ನಡ, ದಕ್ಷಿಣಕನ್ನಡ, ಉಡುಪಿ, ಶಿವಮೊಗ್ಗ ಮತ್ತು ಚಿಕ್ಕಮಗಳೂರಿನಲ್ಲಿ ಧಾರಾಕಾರ ಮಳೆಯಾಗುವ ಸಾಧ್ಯತೆ ಇದೆ.

ಬೆಳಗಾವಿ ಕೊಡಗು, ಮೈಸೂರು, ಹಾಸನ, ಬೆಂಗಳೂರು ಸೇರಿದಂತೆ ಹಲವೆಡೆ ಸಾಧಾರಣ ಮಳೆಯಾಗಲಿದೆ.

ಉತ್ತರಕನ್ನಡ ಜಿಲ್ಲೆಯ ಹಳಿಯಾಳ ಮತ್ತು ಮುಂಡಗೋಡ ತಾಲೂಕನ್ನು ಹೊರತುಪಡಿಸಿ, ಇನ್ನುಳಿದ 10 ತಾಲೂಕುಗಳು ಸೇರಿದಂತೆ, ಶಿವಮೊಗ್ಗ, ದಕ್ಷಿಣಕನ್ನಡ, ಉಡುಪಿ ಜಿಲ್ಲೆಯ ಎಲ್ಲ ಶಾಲೆ ಹಾಗೂ ಕಾಲೇಜುಗಳಿಗೆ ಹಾಗೂ ಹಾಸನದಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ, ಇಂದು ರಜೆ ಘೋಷಿಸಲಾಗಿದೆ.

<><><>

ಕಲಬುರಗಿ ಜಿಲ್ಲೆ, ಶಹಾಬಾದ ತಾಲೂಕಿನಲ್ಲಿ, ಸಂಪೂರ್ಣತಾ ಅಭಿಯಾನ ಕಾರ್ಯಕ್ರಮಕ್ಕೆ, ಕಲಬುರಗಿ ಜಿಲ್ಲಾ ಪಂಚಾಯತ್ ಯೋಜನಾ ಅಂದಾಜು ಮತ್ತು ಮೌಲ್ಯಮಾಪನ ಅಧಿಕಾರಿ ಮಧುಮತಿ ಎಸ್.ಕೆ. ಅವರು ಚಾಲನೆ ನೀಡಿದ್ದಾರೆ.

ಹೊಸ ದಿಲ್ಲಿಯ ನೀತಿ ಆಯೋಗದ ಹಿರಿಯ ಸಾಂಖ್ಯಿಕ ಅಧಿಕಾರಿ ಹರೀಶ, ಪಾಲ್ಗೊಂಡಿದ್ದರು.

<><><>

ನಾಡಿನ ಹೆಮ್ಮೆಯ ಕೃಷಿ ವಿಜ್ಞಾನಿ, ಧಾರವಾಡ ಕೃಷಿ ವಿಶ್ವವಿದ್ಯಾಲಯದ ಮಾಜಿ ಉಪ ಕುಲಪತಿ, ಕರ್ನಾಟಕ ಕೃಷಿ ಮಿ ’ನ್ ಅಧ್ಯಕ್ಷರು ಹಾಗೂ ಭಾರತೀಯ ಕೃಷಿ ಸಂಶೋಧನಾ ಸಂಸ್ಥೆಯ ನಿರ್ದೇಶಕರೂ ಆಗಿದ್ದ, ಕೃಷಿ ಹಾಗೂ ಶಿಕ್ಷಣ ತಜ್ಞ ಡಾಕ್ಟರ್ ಎಸ್.ಎ.ಪಾಟೀಲ್ ಅವರು, ಸೋಮವಾರ ಕಲಬುರಗಿಯಲ್ಲಿ ನಿಧನರಾದರು. ಅವರಿಗೆ 80 ವರ್ಷ ವಯಸ್ಸಾಗಿತ್ತು.

ಅವರು ಜೇವರ್ಗಿ ತಾಲೂಕಿನ, ಬಿರಾಳ ಗ್ರಾಮದ ಕೃಷಿಕ ಕುಟುಂಬದವರು. ನಾಳೆ ಪಾರ್ಥಿವ ಶರೀರದ ಅಂತ್ಯಕ್ರಿಯೆ ಜರುಗಲಿದೆ ಎಂದು, ಕುಟುಂಬ ವರ್ಗ ತಿಳಿಸಿದೆ.

ಎಸ್.ಎ. ಪಾಟೀಲ ಅವರ ನಿಧನಕ್ಕೆ, ಮುಖ್ಯಮಂತ್ರಿ ಸಿದ್ದರಾಮಯ್ಯ, ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಹಾಗೂ ಧಾರವಾಡ ಜಿಲ್ಲೆ ಉಸ್ತುವಾರಿ ಸಚಿವ ಸಂತೋಷ ಲಾಡ್ ಕಂಬನಿ ಮಿಡಿದಿದ್ದಾರೆ.

ಹೈಬ್ರಿಡ್ ಹತ್ತಿ ತಳಿ ಸಂಶೋಧನೆ, ಗುಣಮಟ್ಟದ ಬೀಜ ವಿತರಣೆಗಾಗಿ ‘ಬೀಜ ಗ್ರಾಮ ಯೋಜನೆ’ ಆರಂಭಿಸಿದ ಪಾಟೀಲರು, ಒಟ್ಟು 16 ಮಿಶ್ರ ತಳಿಗಳನ್ನು ಮತ್ತು ಹೆಚ್ಚು ಇಳುವರಿ ನೀಡುವ ತಳಿಗಳನ್ನು ಅಭಿವೃದ್ಧಿಪಡಿಸಿದ ಖ್ಯಾತಿ ಹೊಂದಿದ್ದಾರೆ. ‘ಹೈಬ್ರಿಡ್ ವರಲಕ್ಷ್ಮೀ’ ಹತ್ತಿ ತಳಿ, ಪ್ರಪಂಚದ ಪ್ರಧಾನ ಹೈಬ್ರಿಡ್ ಹತ್ತಿ ಆಗಿದೆ ಎಂದು, ಗಣ್ಯರು ತಮ್ಮ ಶೋಕ ಸಂದೇಶದಲ್ಲಿ ತಿಳಿಸಿದ್ದಾರೆ.

<><><>

ಆಗಸ್ಟ್ ಒಂದರಿಂದ ಏಳನೇ ವೇತನ ಆಯೋಗದ ಶಿಫಾರಸುಗಳನ್ನು ಜಾರಿಗೆ ತರಲು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ಸೋಮವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನಿಸಲಾಗಿದೆ.

ಶೇಕಡ 27 ದಶಾಂಶ 50 ಫಿಟ್‌ಮೆಂಟ್ ಹಾಗೂ ಶೇಕಡ 31 ರಷ್ಟು ತುಟ್ಟಿಭತ್ಯೆ ಮೂಲ ವೇತನಕ್ಕೆ ವಿಲೀನಗೊಳಿಸಲು, ಸುಧಾಕರ್ ನೇತೃತ್ವದ 7ನೇ ವೇತನ ಆಯೋಗ ಶಿಫಾರಸು ಮಾಡಿತ್ತು ಎಂದು, ಮುಖ್ಯಮಂತ್ರಿ ಸಿದ್ದರಾಮಯ್ಯ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪ್ರಕಟಿಸಿದ್ದಾರೆ.

<><><>

ಪ್ರಧಾನಮಂತ್ರಿ ನರೇಂದ್ರ ಮೋದಿ ನೇತೃತ್ವದ, ಕೇಂದ್ರ ಸರ್ಕಾರದಿಂದ ಜೂನ್ 2024ರಲ್ಲಿ, ಪ್ರಧಾನಮಂತ್ರಿ ಗರೀಬ್ ಕಲ್ಯಾಣ ಅನ್ನ ಯೋಜನೆಯಡಿ, ದೇಶದಾದ್ಯಂತ 35 ಲಕ್ಷ 45 ಸಾವಿರದ 918 ಮೆಟ್ರಿಕ್ ಟನ್ ಆಹಾರ ಧಾನ್ಯವನ್ನು ವಿತರಿಸಲಾಗಿದೆ ಎಂದು, ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಖಾತೆ ಸಚಿವ ಪ್ರಲ್ಹಾದ ಜೋಶಿ, ಜಾಲತಾಣ ಎಕ್ಸ್‌ನಲ್ಲಿ ಪ್ರಕಟಿಸಿದ್ದಾರೆ.

<><><>

ಕಲ್ಯಾಣ ಕರ್ನಾಟಕ ಪ್ರದೇಶದ ಹಿಂದುಳಿದ ಜಿಲ್ಲೆ ರಾಯಚೂರಿನಲ್ಲಿ, ಅಖಿಲ ಭಾರತ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ – ಏಮ್ಸ್ ಸ್ಥಾಪಿಸಲು, ರಾಜ್ಯ ಸರ್ಕಾರ ಎಲ್ಲ ರೀತಿಯ ಮೂಲ ಸೌಕರ್ಯ ಕಲ್ಪಿಸಲು ಸಿದ್ಧವಿದೆ ಎಂದು, ವೈದ್ಯಕೀಯ ಶಿಕ್ಷಣ ಸಚಿವ ಡಾಕ್ಟರ್ ಶರಣಪ್ರಕಾಶ ಪಾಟೀಲ, ವಿಧಾನ ಪರಿಷತ್ತಿನಲ್ಲಿ ಹೇಳಿದರು.

ಜೆ.ಡಿ.ಎಸ್. ಶಾಸಕ ತಿಪ್ಪೇಸ್ವಾಮಿ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ರಾಯಚೂರಿನಲ್ಲಿ ಏಮ್ಸ್ ಆಸ್ಪತ್ರೆ ಸ್ಥಾಪನೆಗೆ, ಕೇಂದ್ರ ಸರ್ಕಾರ ಸಹಕರಿಸಬೇಕಿದೆ ಎಂದರು.

<><><>

ಬೆಂಗಳೂರಿನ ನಿಮ್ಹಾನ್ಸ್‌ನಲ್ಲಿ ಆಸ್ಪತ್ರೆಯಲ್ಲಿ, 300 ಹಾಸಿಗೆಗಳ ಪಾಲಿಟ್ರಾಮಾ ಮತ್ತು ಸ್ನಾತಕೋತ್ತರ ಸಂಸ್ಥೆ ಹಾಗೂ ಬೆಂಗಳೂರಿನ ಸಹಕಾರ ನಗರದಲ್ಲಿ ಪೂರ್ಣ ಪ್ರಮಾಣದ CGHS ವೆಲ್‌ನೆಸ್ ಕೇಂದ್ರವನ್ನು ಸ್ಥಾಪಿಸಲು, ಕೇಂದ್ರ ಆರೋಗ್ಯ ಖಾತೆ ಸಚಿವ ಜೆ.ಪಿ.ನಡ್ಡಾ ಅವರಿಗೆ, ಕೇಂದ್ರದ ಕಾರ್ಮಿಕ ಮತ್ತು ಉದ್ಯೋಗ ಖಾತೆ ರಾಜ್ಯ ಸಚಿವರಾದ, ಶೋಭಾ ಕರಂದ್ಲಾಜೆ ಮನವಿ ಮಾಡಿದ್ದಾರೆ.

<><><>

ಇಂದು ವಿಶ್ವ ಹಾವುಗಳ ದಿನ. ಹಾವುಗಳ ಬಗ್ಗೆ ಜನರಲ್ಲಿರುವ ಭಯ ಮತ್ತು ಭ್ರಮೆಗಳನ್ನು ಹೋಗಲಾಡಿಸುವುದು ಈ ದಿನಾಚರಣೆಯ ಧ್ಯೇಯ.

<><><>

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು:

- ರಾಜ್ಯ ವಿಧಾನಮಂಡಲ ಅಧಿವೇಶನ ಆರಂಭ; ಅಗಲಿದ 14 ಜನ ಗಣ್ಯರಿಗೆ ಸಂತಾಪ ಸೂಚನೆ; ಉಭಯ ಸದನಗಳಲ್ಲಿ, ಸಾಧಕರ ಸ್ಮರಣೆ.

- ಡೆಂಘಿ ಚಿಕಿತ್ಸೆಗೆ, ಏಕ ರೂಪದ ದರ ನಿಗದಿ; ಹೆಚ್ಚಿನ ದರ ಪಡೆದಲ್ಲಿ, ನಿರ್ದಾಕ್ಷಿಣ್ಯ ಕ್ರಮ – ಸಚಿವ ದಿನೇಶ್ ಗುಂಡೂರಾವ್, ಎಚ್ಚರಿಕೆ.
- ಆಗಸ್ಟ್ ಒಂದರಿಂದ ಏಳನೇ ವೇತನ ಆಯೋಗದ ಶಿಫಾರಸು, ಜಾರಿಗೆ – ಸಚಿವ ಸಂಪುಟ, ಅನುಮೋದನೆ.
- ರಾಜ್ಯದ ಕರಾವಳಿ ಹಾಗೂ ಮಲೆನಾಡಿನಲ್ಲಿ, ಮಳೆ ಮುಂದುವರಿಕೆ; ಹಲವು ಜಿಲ್ಲೆಗಳಲ್ಲಿ ಇಂದು ಶಾಲೆ–ಕಾಲೇಜುಗಳಿಗೆ ರಜೆ ಘೋಷಣೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಗ್ಗೆ 7.35 ಕ್ಕೆ.

<><><>